Dt 08.08.2024

MVC No.529-2022
PW-1 ಸಪ್ತೋಟ
Date: 08.08.2024

**<u>ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಪಾಟೀ ಸವಾಲು 1 ನೇ ಎದುರುದಾರ ಪರ ವಕೀಲರಿಂದಃ</u>**

ನನಗೆ ಟಿವಿಎಸ್ ಎಕ್ಸ್‌ಎಲ್ ವಾಹನ ಚಾಲನೆ ಮಾಡಲು ಚಾಲನಾ ಪರವಾನಿಗೆ ಪತ್ರ ಇರುವುದಿಲ್ಲ. ಅಪಘಾತವಾದ ದಿವಸ ನಾನು ನನ್ನ ದಿಚಕ್ರ ವಾಹನವನ್ನು ಚಾಲನೆ ಮಾಡುತ್ತಿದ್ದೇನು ಎಂದರೆ ಸರಿ. ನನ್ನೊಂದಿಗೆ ಅಭಿನಂದ ಮತ್ತು ನನ್ನ ಅಣ್ಣ ರಾಮು ರವರು ಇದ್ದರು ಎಂದರೆ ಸರಿ. ನಾನೇ ಅತೀ ವೇಗವಾಗಿ ನನ್ನ ವಾಹನವನ್ನು ಚಾಲನೆ ಮಾಡಿ ಲಾರಿಗೆ ಡಿಕ್ಕಿ ಹೊಡೆದಿರುತ್ತೇನೆ ಎಂದರೆ ಸರಿಯಲ್ಲ. ನನಗೆ ವಾಹನ ಚಾಲನೆ ಮಾಡಲು ಬರುತ್ತಿರಲಿಲ್ಲ ಮತ್ತು ನಾನೇ ಅಪಘಾತ ಪಡಿಸಿ ಪರಿಹಾರಕೋಸ್ಕರ 1 ನೇ ಎದುರುದಾರರ ವಿರುದ್ಧ ಸುಳ್ಳು ಅಂಶಗಳನ್ನು ಒಳಗೊಂಡ ಅರ್ಜಿಯನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ನಾನು ಕೂಲಿ ಕೆಲಸ ಮಾಡುತ್ತಿದ್ದೆ ಮತ್ತು ನನಗೆ 20,000 ಸಾವಿರ ರೂಪಾಯಿ ಮಾಸಿಕ ಸಂಬಳ ಇತ್ತು ಎಂದು ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಲಾರಿ ವಿಮೆಗೆ ಒಳಪಟ್ಟಿತ್ತು ಎಂದರೆ ನನಗೆ ಗೊತ್ತಿಲ್ಲ. ಲಾರಿಗೆ ವಿಮೆಗೆ ಒಳಪಟ್ಟಿದ್ದ ಕಾರಣ 1 ನೇ ಎದುರುದಾರರು ಯಾವುದೇ ಪರಿಹಾರದ ಹಣವನ್ನು ಕೊಡುವ ಬಾಧ್ಯಸ್ಥಿಕೆಯನ್ನು ಹೊಂದಿರುವುದಿಲ್ಲ ಎಂದರೆ ಸರಿಯಲ್ಲ.

**(2 ನೇ ಎದುರುದಾರ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು)**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.

Dt 08.08.2024

ಓ.ಹೇ.ಕೇ.ಸ. ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ, ಚಳ್ಳಕೆರೆ.